ಗ್ಯಾರೆಂಟಿ ಯೋಜನೆಗಳೆ ಸಂಸತ್ ಚುನಾವಣೆಗೆ ಕಾಂಗ್ರೆಸ್‌ಗೆ ದೊಡ್ಡ ಶಕ್ತಿ– ಸಚಿವ ನಾಗೇಂದ್ರ

ಬಳ್ಳಾರಿ, ಮಾ–: ರಾಜ್ಯದಲ್ಲಿ ಮುಖ್ಯ ಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಸರ್ಕಾರ ಜಾರಿಗೆ ತಂದಿರುವ ಗ್ಯಾರೆಂಟಿ ಯೋಜನೆಗಳ ಸಂಸತ್ ಚುನಾವಣೆಯಲ್ಲಿ ನಮ್ಮ ಅಭ್ಯರ್ಥಿಗಳ ಗೆಲುವಿಗೆ ದೊಡ್ಡ ಶಕ್ತಿಯಾಗಲಿದೆಂದು ಕ್ರೀಡಾ ಸಚಿವ ಬಿ.ನಾಗೇಂದ್ರ ಹೇಳಿದ್ದಾರೆ.ನಗರದಲ್ಲಿಂದು ತಮ್ಮ ನಿವಾಸದಲ್ಲಿ ಭೇಟಿ ಮಾಡಿದ ಸುದ್ದಿಗಾರರೊಂದಿಗೆ ಮಾತನಾಡಿ ಗ್ಯಾರೆಂಟಿ ಯೋಜನೆಗಳ ಸದುಪಯೋಗ ಹೆಚ್ಚಾಗಿ ಮಹಿಳೆಯರಿಗೆ ದೊರೆತಿದೆ. ಮಹಿಳಾ ಮತದಾರರಲ್ಲಿ ಈ ಯೋಜನೆಗಳು ಕಾಂಗ್ರೆಸ್ ಪರ ಒಲವು ಮೂಡಿಸಲು ನಮ್ಮ ರಾಜ್ಯದಲ್ಲಿ ಹೊಸ ಸಂಚಲನವೇ ಮಾಡಿದೆ ಎಂದರು.

ಗ್ಯಾರೆಂಟಿ ಯೋಜನೆ ಕೆಲವರಿಗೆ ಕೆಲ ಕಾರಣದಿಂದ ಬರದಿರುವ ಸಮಸ್ಯೆಗಳನ್ನು ಬಗೆಹರಿಸಲಿದ್ದೇವೆ ಎಂದರು ಬಿಜೆಪಿಯವರು .ನಮ್ಮ ಗ್ಯಾರೆಂಟಿಗಳಿಂದಲೇ ಪ್ರಭಾವಿತರಾಗಿ ಮೋದಿಯವರೇ ಗ್ಯಾರೆಂಟಿ ಎಂದು ಹೊರಟಿದ್ದಾರೆ. ಮೋದಿ ಅವರ ಸುಳ್ಳು ಭರವಸೆಗಳನ್ನು ಜನರ ಮುಂದೆ ಇಡುತ್ತೇವೆ.ಇಂಡಿಯಾ ಒಕ್ಕೂಟ ಅಧಿಕಾರಕ್ಕೆ ಬರಲಿದೆಂಬ ವಿಶ್ವಾಸ ಇದೆ. ಧರ್ಮ ಧರ್ಮಗಳ ಮಧ್ಯೆ ವಿಷ ಬೀಜ ಬಿತ್ತುವ ಬಿಜೆಪಿ ದೂರ ಆಗಬೇಕಿದೆಂದು ಜನ ಬಯಸಿದ್ದಾರೆ.ರಾಜ್ಯದಲ್ಲಿ ಮೊದಲ ಹಂತದ ಪ್ರಕ್ರಿಯೆ ಆರಂಭಗೊಂಡಿದೆ. ಡಿಕೆ. ಸುರೇಶ್ ಅವರು ಇಂದು ನಾಮ ಪತ್ರ ಸಲ್ಲಿಸಿದ್ದಾರೆ ಅವರ ಗೆಲುವು ಖಚಿತ.

ಬಳ್ಳಾರಿ ಕ್ಷೇತ್ರಕ್ಕೆ ಅಭ್ಯರ್ಥಿಯ ಅಧಿಕೃತ ಘೋಷಣೆ ಬಾಕಿ ಇದೆ. ಈ ತುಕರಾಂ ಅವರೇ ಅಭ್ಯರ್ಥಿಯಾಗಲಿದ್ದಾರೆಂದರು.

ರಾಜ್ಯದ 20 ಕ್ಷೇತ್ರದ ಗೆಲುವು ನಮ್ಮ ಗುರಿ. ಇದೆ 28 ರಲ್ಲೂ ಗೆಲ್ಲುವ ಸ್ಥಿತಿ ಇದೆ. ಟಿಕೆಟ್ ನೀಡಿಕೆಯಲ್ಲಿ ಯುವಕರು, ಮಹಿಳೆಯರಿಗೆ ಆದ್ಯತೆ ನೀಡಿದೆ. ರಾಜ್ಯದಲ್ಲಿನ ಈ ಚುನಾವಣಾ ಫಲಿತಾಂಶ ಇಡೀ ದೇಶವೇ ರಾಜ್ಯದ ಕಡೆ ನೋಡುವಂತಾಗಲಿದೆಂದರು.ಜಿಲ್ಲಾ ಉಸ್ತುವಾರಿ ಸಚಿವರಿಗೆ ಆಯಾ ಜಿಲ್ಲೆಯಲ್ಲಿ ಅಭ್ಯರ್ಥಿಗಳ ಗೆಲುವಿಗೆ ಶ್ರಮಿಸಲು ಜವಾಬ್ದಾರಿ ನೀಡಿದ್ದಾರೆ. ನಮ್ಮ ಜಿಲ್ಲೆಯಲ್ಲಿ ಈ ಮೊದಲು ಉಸ್ತುವಾರಿಯಾಗಿದ್ದ ಸಂತೋಷ್ ಲಾಡ್ ಅವರು ಸಹ ಗೆಲುವಿಗೆ ಸಾಮೂಹಿಕವಾಗಿ ಶ್ರಮಿಸಲಿದ್ದಾರೆ. ನನ್ನೆ ಸಂಡೂರಿನಲ್ಲಿ ತಾವು ಸಭೆಯಲ್ಲಿ ಭಾಗವಹಿಸಿಲ್ಲ ಎಂಬುದಕ್ಕೆ ಬೇರೆ ಅರ್ಥ ಬೇಡ, ನನಗೆ ಪಾಲಿಕೆ ಮೇಯರ್ ಚುನಾವಣೆ ಸಂಬಂದ ಬಳ್ಳಾರಿಯಲ್ಲಿದ್ದೆ.ಅಭ್ಯರ್ಥಿಯ ಅಧಿಕೃತ ಘೋಷಣೆ ನಂತರ ಅಭ್ಯರ್ಥಿ ಜೊತೆ ಪ್ರವಾಸ ಮಾಡಲಿದ್ದೆಂದರು ಚರ್ಚೆಯಾಗಿಲ್ಲ: ಸಂಸತ್ ಚುನಾವಣೆ ಫಲಿತಾಂಶದ ನಂತರ ಸಿಎಂ ಬದಲಾವಣೆಯ ಚರ್ಚೆ ಆಗಿಲ್ಲ. ಇದೆಲ್ಲ ಊಹಾಪೋಹಾ. ಸಹಜವಾಗಿ ಎಲ್ಲರಿಗೂ ಪಕ್ಷದ ಅಭ್ಯರ್ಥಿಗಳ ಗೆಲುವಿನ ಟಾಸ್ಕ್ ನೀಡಿದೆ. ಆ ಪ್ರಯತ್ನ ಮಾಡುತ್ತೇವೆಂದರು.ಮೀಸಲಾತಿ ಸಾಮಾನ್ಯ ಇದ್ದಾಗ ಆಕಾಂಕ್ಷಿಗಳು ಸಹಜವಾಗಿ ಹೆಚ್ಚು ಇರುತ್ತಾರೆ. ಯಾವುದೇ ಭಿನ್ನಾಭಿಪ್ರಾಯದಿಂದ ಪಾಲಿಕೆಯ ಮೇಯರ್ ಚುನಾವಣೆ ಮುಂದೂಡಿಲ್ಲ. ಎಂ.ಚುನಾವಣೆ ಹಿನ್ನಲೆಯಲ್ಲಿ ಅಧಿಕಾರಿಗಳು ಮುಂದೂಡಿದ್ದಾರೆ.ಪಾಲಿಕೆಯಲ್ಲಿ ಎಂದೇ ಆಗಲಿ ಕಾಂಗ್ರೆಸ್ ಬಾವುಟ ಹಾರಲಿದೆ. ನಾನು, ರಾಜ್ಯ ಸಭಾ ಸದಸ್ಯರು, ನಗರ ಶಾಸಕರು ಸೇರಿಯೇ ತೀರ್ಮಾನ ತೆಗೆದುಕೊಳ್ಳಲಿದೆಂದರು.

ಮತ್ತೆ ಬಿಜೆಪಿ ಸೇರಬಾರದಿತ್ತು:ಬಿಜೆಪಿಯನ್ನು ಮಕಾಡೆ ಮಲಗಿಸುತ್ತೇವೆ ಎಂದು ಹೊಸ ಪಕ್ಷ ಕಟ್ಟಿದ್ದ ಗಾಲಿ ಜನಾರ್ಧನರೆಡ್ಡಿ ಅವರು ಈಗ ಮತ್ತೆ ಬಿಜೆಪಿ ಸೇರಿ ತಪ್ಪು ಮಾಡಿದ್ದಾರೆ. ಗಂಗಾವತಿಯಲ್ಲಿ ಜಾತ್ಯತೀತೆಯಿಂದ ಮತ ಪಡೆದಿದ್ದರು. ಈಗ ಕ್ಷೇತ್ರದ ಮತದಾರರಿಗೆ ಏನು ಹೇಳುತ್ತಾರೆ.

ಪಕ್ಷ ಸೇರುವ ಮುನ್ನ ಶ್ರೀರಾಮುಲು ಸೋಲುತ್ತಾರೆಂದಿದ್ದರು. ಅಂತಹವರಿಂದ ನಮ್ಮ ಅಭ್ಯರ್ಥಿ ಗೆಲುವಿಗೆ ಆತಂಕ, ಭಯ ಇಲ್ಲ, ಕೇಸುಗಳಿಂದ ಭಯ ಬಿದ್ದು ಬಿಜೆಪಿ ಸೇರಿರಬಹುದು.ಎಲ್ಲೇ ಇರಲಿ ಅವರಿಗೆ ಒಳ್ಳೆದಾಗಲಿ. ಬಿಜೆಪಿ ಪಕ್ಷಕ್ಕೆ ಅಂತಹ ನೂರು ಜನ ಬಂದರೂ ನಮ್ಮ ಶಕ್ತಿ ಕುಂದಲ್ಲಎಂದು ಹೇಳಿದರು.

ಸಚಿವ ಶಿವರಾಜ್ ತಂಗಡಗಿ ವಿರುದ್ಧ ಕ್ರಮಕ್ಕೆ ಒತ್ತಾಯ–ಎಂ.ಎಸ್.ಸಿದ್ದಪ್ಪ

ಬಳ್ಳಾರಿ,ಮಾ–: ಮೋದಿ ಮೋದಿ ಎಂದರೆ ಕಪಾಳಕ್ಕೆ ಹೊಡಿರಿ ಎಂದು ತಾಲಿಬಾನ್ ಫತ್ವಾ ಹೊರಡಿಸಿ ತಾಲಿಬಾನ್ ಆಡಳಿತ ಜಾರಿಗೆ ತರಲು ಯತ್ನಿಸಿದ ಸಚಿವ ಶಿವರಾಜ ತಂಗಡಗಿ ವಿರುದ್ಧ ಬಳ್ಳಾರಿ ಜಿಲ್ಲಾ ಬಿಜೆಪಿ ಯುವ ಮೋರ್ಚಾ ವತಿಯಿಂದ ಯುವಮೋಚ್ ಜಿಲ್ಲಾಧ್ಯಕ್ಷರಾದ ಎಂ.ಎಸ್.ಸಿದ್ದಪ್ಪ ನೇತೃತ್ವದಲ್ಲಿ ನಗರದ ಜಿಲ್ಲಾಧಿಕಾರಿಗಳ ಕಛೇರಿ ಆವರಣದಲ್ಲಿ ಪ್ರತಿಭಟನೆ ಮಾಡಲಾಯಿತು.

ಶಿವರಾಜ್ ತಂಗಡಗಿ ವಿರುದ್ಧ ಸೂಕ್ತ ಕ್ರಮ ತೆಗೆದುಕೊಳ್ಳಲು ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಲಾಯಿತು. ಈ ಸಂದರ್ಭದಲ್ಲಿ ಬಿಜೆಪಿ ಯುವ ಮೋರ್ಚಾ ರಾಜ್ಯ ಕಾರ್ಯದರ್ಶಿಗಳಾದ ಅಡಿವಿಸ್ವಾಮಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾದ ರಾಘವೇಂದ್ರ, ಸುದರ್ಶನ ರೆಡ್ಡಿ, ಮತ್ತು ಅಂಜಿನ, ನವೀನ್, ಗಿರೀಶ್, ಹಾಗೂ ಜಿಲ್ಲಾ ಅರುಣ್ ಬಾಲಚಂದ್ರ, ಅಂಬಣ್ಣ, ಪದಾಧಿಕಾರಿಗಳು, ಯುವ ಮೋರ್ಚಾ ಸಿದ್ದೇಶ, ನಾಗರಾಜ್ ಯರಿಸ್ವಾಮಿ, ಕಾರ್ಯಕರ್ತರು ಭಾಗಿಯಾಗಿದ್ದರು.

ಎಡಗೈ ಸಮುದಾಯಕ್ಕೆ ಟಿಕೆಟ್ ನೀಡಿ, 80 ಲಕ್ಷ ಮತದಾರರನ್ನು ಹೊಂದಿರುವ ಈ ಸಮುದಾಯವನ್ನು ರಾಜಕೀಯವಾಗಿ ಎತ್ತುವ ಕೆಲಸ ರಾಜ್ಯ ಕಾಂಗ್ರೆಸ್ ಮಾಡಬೇಕು–ವೆಂಕಟೇಶ್ ಹೆಗಡೆ

ಬಳ್ಳಾರಿ ಮಾ –: ಲೋಕಸಭಾ ಚುನಾವಣೆಯಲ್ಲಿ ಎಡಗೈ ಸಮುದಾಯಕ್ಕೆ ಎರಡು ಟಿಕೆಟ್ ನೀಡುವ ಪದ್ಧತಿಯನ್ನು ಕಾಂಗ್ರೆಸ್ ಪಾಲಿಸಿಕೊಂಡು ಬಂದಿತ್ತು. ಕಲಬುರ್ಗಿ, ಮತ್ತು ಚಾಮರಾಜನಗರ ಕ್ಷೇತ್ರಗಳಲ್ಲಿ ಬಲಗೈ ಸಮುದಾಯಕ್ಕೆ ನೀಡಿದರೆ, ಚಿತ್ರದುರ್ಗ, ಕೋಲಾರ ಕ್ಷೇತ್ರವನ್ನು ಎಡಗೈ ಸಮುದಾಯಕ್ಕೆ ನೀಡುವ ಪರಿಪಾಠ ಇತ್ತು. ಬಿಜಾಪುರ ಕ್ಷೇತ್ರ ಭೋವಿ ಅಥವಾ ಲಂಬಾಣಿ ಸಮುದಾಯದರವರಿಗೆ ನೀಡುತ್ತಿದ್ದರು, ಆದರೆ ಈ ಬಾರಿ ಕೇವಲ ಚಿತ್ರದುರ್ಗಕ್ಕೆ ಮಾತ್ರ ಎಡಗೈ ಸಮುದಾಯಕ್ಕೆ ನೀಡಲಾಗಿದೆ.

ಕೋಲಾರದಲ್ಲಿ ಬಲಗೈ ಸಮುದಾಯಕ್ಕೆ ಟಿಕೆಟ್ ನೀಡುವಂತೆ ಅಲ್ಲಿನ ನಾಯಕರು ಒತ್ತಾಯ ಮಾಡುತ್ತಿದ್ದಾರೆ. ಇದು ಎಡಗೈ ಸಮುದಾಯಕ್ಕೆ ಅನ್ಯಾಯ ಮಾಡಿದ ಹಾಗೆ ಆಗುತ್ತದೆ. ಹೀಗೆ ಮಾಡುವುದರಿಂದ ಎಡಗೈ ಸಮುದಾಯದ ವಿರೋಧ ಕಟ್ಟಿಕೊಂಡು ಹಾಗೆ ಆಗುತ್ತದೆ. ಮತ್ತು ಹಿಂದಿನ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಟಿಕೆಟ್ ನ್ನು ಕಲ್ಯಾಣ ಕರ್ನಾಟಕದ ಭಾಗದ ಮೀಸಲು ಕ್ಷೇತ್ರಗಳಲ್ಲಿ ಒಂದು ಕ್ಷೇತ್ರವನ್ನು ಎಡಗೈ ಸಮುದಾಯಕ್ಕೆ ಕೊಡದೆ ಅನ್ಯಾಯವಾಗಿರುತ್ತದೆ. ಆದ್ದರಿಂದ ಪಕ್ಷದ ವರಿಷ್ಠರು ಇದನ್ನು ಗಮನದಲ್ಲಿ ಇಟ್ಟುಕೊಳ್ಳಬೇಕು. ಇದ್ದ ಸಂಪ್ರದಾಯದ ಹಾಗೆ ಕೋಲಾರದಲ್ಲಿ ಎಡಗೈ ಸಮುದಾಯಕ್ಕೆ ಟಿಕೆಟ್ ನೀಡಬೇಕು. ರಾಜ್ಯದಲ್ಲಿ ಸುಮಾರು 80 ಲಕ್ಷ ಮತದಾರರನ್ನು ಹೊಂದಿರುವ ಈ ಸಮುದಾಯವನ್ನು ರಾಜಕೀಯವಾಗಿ ಎತ್ತುವ ಕೆಲಸವನ್ನು ರಾಜ್ಯ ಕಾಂಗ್ರೆಸ್ ಮಾಡಬೇಕು ಎಂದು ವೆಂಕಟೇಶ್ ಹೆಗಡೆ ವಕೀಲರು, ಕೆಪಿಸಿಸಿ ರಾಜ್ಯ ಮಾಧ್ಯಮ ವಕ್ತಾರರು ಹಾಗೂ ಕೆಪಿಸಿಸಿ ರಾಜ್ಯ ಜಂಟಿ ಸಂಯೋಜಕರು ಪ್ರಚಾರ ಸಮಿತಿ ಬಳ್ಳಾರಿ ಇವರು ಪತ್ರಿಕಾ ಪ್ರಕಟಣೆಯಲ್ಲಿ ಆಗ್ರಹಿಸಿದ್ದಾರೆ.

ವಿಜಯನಗರ ವೈದ್ಯಕೀಯ ವಿಜ್ಞಾನ ಸಂಸ್ಥೆಯ 63ನೇ ಪದವಿ ಪ್ರದಾನ ಸಮಾರಂಭ ವೈದ್ಯಕೀಯ ಪದವೀಧರರು ಉತ್ತಮ ವೈದ್ಯಕೀಯ ಸೇವೆ ನೀಡಿ–ಡಾ.ಚಂದ್ರಮೋಹನ್

ಬಳ್ಳಾರಿ,ಮಾ–: .ವೈದ್ಯಕೀಯ ಪದವಿ ಪೂರ್ಣಗೊಳಿಸಿದ ಪಧವೀದರರು ಸಮಾಜದಲ್ಲಿ ಉತ್ತಮ ವೈದ್ಯಕೀಯ ಸೇವೆ ನೀಡಬೇಕು ಎಂದು ತಮಿಳುನಾಡು ಸರ್ಕಾರದ ಲೋಕೋಪಯೋಗಿ ಇಲಾಖೆಯ ಪ್ರಧಾನ ಕಾರ್ಯ ದರ್ಶಿ ಡಾ.ಚಂದ್ರ ಮೋಹನ್.ಬಿ ಅವರು ಹೇಳಿ ದರು.ಇಲ್ಲಿಯ ವಿಮ್ಸ್ ಸಭಾಂಗಣದಲ್ಲಿ ಗುರುವಾರ ಏರ್ಪಡಿಸಿದ್ದ ವಿಜಯನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ 63ನೇ ಪದವಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವೈದ್ಯಕೀಯ ವೃತ್ತಿಯಲ್ಲಿ ತೊಡಗುವವರು ವೈದ್ಯಕೀಯ ಕ್ಷೇತ್ರಕ್ಕೆ ಸೀಮಿತವಾಗದೇ, ಬಾಹ್ಯ ಪ್ರಪಂಚವನ್ನು ಉತ್ಸುಕದಿಂದ ಅನ್ವೇಷಿಸುವ ಕಾರ್ಯ ಪ್ರವೃತ್ತಿ ಬೆಳೆಸಿಕೊಳ್ಳಬೇಕು ಎಂದು ಸಲಹೆ ಮಾಡಿದರು.

ವೈದ್ಯಕೀಯ ಪದವಿ ಪೂರ್ಣಗೊಳಿಸಿದವರು ನೀವು ಎಳ್ಳು ದೂರ ಬಂದಿದ್ದೀರಿ ಎಂಬುದರ ಬಗ್ಗೆ ಹೆಮ್ಮೆಪಡಬೇಕು ಮತ್ತು ಅದೇರೀತಿ ಎಳ್ಳು ಎತ್ತರ ಬೆಳೆಯಬಹುದು ಎಂಬುದರಲ್ಲಿ ನಂಬಿಕೆ ಇಟ್ಟು, ಜನಸಾಮಾನ್ಯರಿಗೆ ಪ್ರಾಮಾಣಿಕ ಸೇವೆ ನೀಡುವುದರ ಮೂಲಕ ತಮ್ಮ ಕರ್ತವ್ಯವನ್ನು ಆನಂದಿಸಬೇಕು ಎಂದು ಕಿವಿಮಾತು ಹೇಳಿದರು.

ವೈದ್ಯಕೀಯ ವಿದ್ಯಾರ್ಥಿಗಳು ಹೃದಯದಲ್ಲಿ ಧೈರ್ಯ, ಮನಸ್ಸಿನಲ್ಲಿ ನಮ್ರತೆ ಮತ್ತು ಬದಲಾವಣೆ ರೂಪಿಸುವ ಅಚಲ ಸಂಕಲ್ಪದೊಂದಿಗೆ ಮುಂದುವರಿಯಿರಿ ಎಂದು ಕರೆ ನೀಡಿದರು.

ಜಿಲ್ಲಾಧಿಕಾರಿ ಹಾಗೂ ವಿಮ್ಸ್ ಆಡಳಿತ ಮಂಡಳಿಯ ಸದಸ್ಯರಾದ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಮಾತನಾಡಿ, ವೈದ್ಯರು ರೋಗಿಗಳೊಡನೆ ಉತ್ತಮವಾಗಿ ಸ್ಪಂದಿಸಿ ತಾಳ್ಮೆಯಿಂದ ವರ್ತಿಸುವುದು ವೈದ್ಯರ ಆದ್ಯ ಕರ್ತವ್ಯವಾಗಿದ್ದು, ಸಹಕಾರ–ಸಹಾಯ ಮನೋಭಾವನೆ ಗುಣ ವೈದ್ಯರಲ್ಲಿ ಇರಬೇಕು. ಇದರಿಂದ ಜಿಲ್ಲೆಯ ಜನ ಸಾಮಾನ್ಯರು ತಮ್ಮ ಬಗ್ಗೆ ಹೆಮ್ಮೆಪಡಬೇಕು ಎಂದು ಹೇಳಿದರು.

ವಿಲ್ಬಸ್ಟನ ನರ್ದೇಶಕ ಹಾಗೂ ಡೀನ್ ಆದ ಡಾ.ಟಿ.ಗಂಗಾಧರ ಗೌಡ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಕಲಿಕೆ ಎನ್ನುವುದು ಜೀವನದುದ್ದಕ್ಕೂ ಇದ್ದು, ಇದಕ್ಕೆ ಕೊನೆಯಿಲ್ಲ, ವೈದ್ಯಕೀಯ ವಿದ್ಯಾರ್ಥಿಗಳು ಪ್ರಸ್ತುತವಿರುವ ಜ್ಞಾನಕ್ಕೆ ತಕ್ಕಂತೆ ನವೀಕರಣಗೊಂಡು ಅಭಿವೃದ್ಧಿ ಹೊಂದಬೇಕು ಎಂದು ಕಿವಿ ಮಾತು ಹೇಳಿದರು.

ವಿಜಯನಗರ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ವೈದ್ಯಕೀಯ ಪದವಿ ಪಡೆದ ಪದವೀಧರರು ವಿಶ್ವದಾದ್ಯಂತ ಮನ್ನಣೆಗಳಿಸಿದ್ದಾರೆ. ಅವರಂತೆ ತಾವೂ ಕೂಡ ಸಾಧನೆಯ ಮೈಲಿಗಲ್ಲು ತಲುಪಬೇಕು ಎಂದು ಪದವಿ ಪಡೆದ ವೈದ್ಯಕೀಯ ವಿದ್ಯಾರ್ಥಿಗಳನ್ನು ಆಶಿಸಿದರು.

ಯು.ಎಸ್.ಎ ನ ವಾಸ್ಕುಲರ್ ಶಸ್ತ್ರಚಿಕಿತ್ಸಕ ಡಾ.ಪಿ.ವಿ .ಪತಂಜಲಿ ಶರ್ಮಾ ಅವರು ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿ, ಬಳ್ಳಾರಿಯಲ್ಲಿ ಮೆಡಿಕಲ್ ಕಾಲೇಜ್ ನರ್ಮಾಣದ ಕನಸು ಈಗ ನನಸಾಗಿದ್ದು, ನನ್ನ ಎಲ್ಲಾ ಸಾಧನೆಗೆ ವಿಮ್ಸ್ ಸಂಸ್ಥೆಯು ಅಡಿಪಾಯವಾಗಿದೆ ಎಂದರು.

ಕಳೆದ ಸಾಲಿನಂದ ಡಾ.ಪಿ.ವಿ.ಪತಂಜಲಿ ಶರ್ಮಾ ಅವರ ಪ್ರಾಯೋಜಕತ್ವದಲ್ಲಿ ಬಂಗಾರದ ಪದಕ ಮತ್ತು ಹತ್ತು ಸಾವಿರ ನಗದು ಹಣವನ್ನು ಯಾರ್ಂಕ್ ಪಡೆದ ಮೂರು ವೈದ್ಯಕೀಯ ವಿದ್ಯಾರ್ಥಿಗಳಿಗೆ ಕೊಡುಗೆಯಾಗಿ ನೀಡಲಾಗುತ್ತಿದೆ. ಇದು ಸಂತಸದ ವಿಳಯವಾಗಿದೆ ಎಂದು ತಿಳಿಸಿದರು.

ಸಮಾರಂಭದಲ್ಲಿ 95 ಸ್ನಾತಕೋತ್ತರ ವೈದ್ಯಕೀಯ ವಿದ್ಯಾರ್ಥಿಗಳು ಹಾಗೂ 55 ಸ್ನಾತಕ ಪದವಿ ವೈದ್ಯಕೀಯ ವಿದ್ಯಾರ್ಥಿಗಳು ಸೇರಿದಂತೆ 150 ವೈದ್ಯಕೀಯ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು.

ಈ ಸಂಧರ್ಭದಲ್ಲಿ ಕರ್ನಾಟಕ ವೈದ್ಯಕೀಯ ಮಂಡಳಿಯ ಸದಸ್ಯ ಡಾ.ವೈ.ಸಿ.ಯೋಗಾನಂದ ರೆಡ್ಡಿ, ವಿಲ್ಬಸ್ಟನ ಪ್ರಭಾರಿ ಪ್ರಾಂಶುಪಾಲ ಡಾ.ಮಲ್ಲಿಕಾರ್ಜುನ, ನರ್ಸಿಂಗ್ ಕಾಲೇಜಿನ ಪ್ರಾಂಶುಪಾಲರಾದ ಸುಮಾ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ.ರಮೇಶ್ ಬಾಬು, ಜಿಲ್ಲಾ ಆಸ್ಪತ್ರೆಯ ನರ್ದೇಶಕ ಮತ್ತು ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಬಸರೆಡ್ಡಿ.ಎನ್ ಸೇರಿದಂತೆ ವಿಲ್ಬಸ್ಟನ ಹಳೆಯ ವಿದ್ಯಾರ್ಥಿಗಳು, ನವೃತ್ತ ಪ್ರಾಂಶುಪಾಲರು, ವೈದ್ಯಕೀಯ ವಿದ್ಯಾರ್ಥಿಗಳು, ಪೋಳಕರು ಮತ್ತು ಇನ್ನಿತರರು ಉಪಸ್ಥಿತರಿದ್ದರು.

ಬಳ್ಳಾರಿ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಮಹಿಳಾ ಮೋರ್ಚಾ ಕಾರ್ಯಕಾರಿಣಿ ಸಭೆ

ಬಳ್ಳಾರಿ,ಮಾ–: ಬಳ್ಳಾರಿ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ವಾಜಪೇಯಿ ಬಡಾವಣೆಯಲ್ಲಿ ಜಿಲ್ಲಾ ಮಹಿಳಾ ಮೋರ್ಚಾ ವಿಶೇಳ ಕಾರ್ಯಕಾರಿಣಿ ಸಭೆಯನ್ನು ಹಮ್ಮಿಕೊಳ್ಳಲಾಗಿತ್ತು.

ಈ ಕಾರ್ಯಕ್ರಮದಲ್ಲಿ ರಾಜ್ಯ ಮಹಿಳಾ ಮೋರ್ಚಾ ಅಧ್ಯಕ್ಷೆ ಮಂಜುಳಾ.ಪಿ, ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿ, "ಮೋದಿ ಕೀ ಗ್ಯಾರಂಟಿ" ನಾರಿ ಶಕ್ತಿಯನ್ನು ರಾಳ್ಟ ಶಕ್ತಿಯನ್ನಾಗಿಸಿದ ನರೇಂದ್ರ ಮೋದಿ ಅವರು ನೇತೃತ್ವದಲ್ಲಿ ಬಿಜೆಪಿ ಮಹಿಳಾಪರ ಯೋಜನೆಗಳ, ಬಗ್ಗೆ ನಾರಿಶಕ್ತಿ ವಂದನ ಪ್ರಯುಕ್ತ(ಮಹಿಳಾ ಮೀಸಲಾತಿ), ಲಕ್ ಪತಿ ದೀದಿ, ಮಾತೃ ವಂದನ ಯೋಜನೆ. ಭೇಟಿ ಬಜಾವೋ ಭೇಟಿ ಬಡಾವೋ, ಸುಕನ್ಯಾ ಸಮೃದ್ಧಿ ಯೋಜನೆ, ಉಜ್ವಲ ಯೋಜನೆ, ಇದೆ ರೀತಿಯಲ್ಲಿ ಅನೇಕ ಮಹಿಳಾಪರ ಯೋಜನೆಗಳ ಬಗ್ಗೆ ಮಹಿಳೆಯರಿಗೆ ತಿಳಿಸಿದರು.

ಈ ಕಾರ್ಯಕ್ರಮಕ್ಕೆ ಬಿಜೆಪಿ ಜಿಲ್ಲಾಧ್ಯಕ್ಷ ಅನಲ್‌ಕುಮಾರ್ ಮೋಕಾ, ಜಿಲ್ಲಾ ಮಹಿಳಾ ಮೋರ್ಚಾ ಅಧ್ಯಕ್ಷೆ ಸುಗುಣ.ಕೆ.. ರಾಜ್ಯ ಮಹಿಳಾ ಮೋರ್ಚಾ ಉಪಾಧ್ಯಕ್ಷೆ ಶಿವ ಶರಣಮ್ಮ, ಪಾರ್ವತಿ ಇಂದು ಶೇಖರ್, ಜಿಲ್ಲಾ ಉಪಾಧ್ಯಕ್ಷೆ ಅಲಿವೇಲು ಸುಮಾರೆಡ್ಡಿ, ಮಹಾನಗರ ಪಾಲಿಕೆಯ ಸದಸ್ಯೆಯರಾದ ಚೇತನ ಬೀಮಣ್ಣ, ಸುರೇಖಾ ಮಲ್ಲನಗೌಡ, ಜಿಲ್ಲಾ ಮಹಿಳಾ ಮೋರ್ಚಾ ಪ್ರಧಾನ ಕಾರ್ಯದರ್ಶಿಗಳಾದ ಜ್ಯೋತಿಪ್ರಕಾಶ್, ಪುಳ್ಪಲತಾ, ಹಾಗೂ

ಜಿಲ್ಲಾ ಮಹಿಳಾ ಮೋರ್ಚಾ ಪದಾಧಿಕಾರಿಗಳು, ಹಾಗೂ ಮಂಡಲ ಅಧ್ಯಕ್ಷರು, ಪ್ರಧಾನ ಕಾರ್ಯದರ್ಶಿಗಳು, ಹಾಗೂ ಮಂಡಲ ಮಹಿಳಾ ಮೋರ್ಚಾ ಪದಾಧಿಕಾರಿಗಳು ಹಾಗೂ ಮಹಿಳಾ ಜಿಲ್ಲೆಯ ಎಲ್ಲಾ ಮಹಿಳಾ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

ಕಾಮರತಿ ಉತ್ಸವದ ಅಂಗವಾಗಿ ಸಾಂಸ್ಕೃತಿಕ ಕಾರ್ಯಕ್ರಮ

ಗದಗ: ನಗರದ ಹಾಳದಿಬ್ಬ ಓಣಿಯಲ್ಲಿ ವಿವಿಧೋದ್ದೇಶಗಳ ಸೇವಾ ಸಂಸ್ಥೆ, ಕಾಮರತಿ ಉತ್ಸವ ಸಮಿತಿ ವತಿಯಿಂದ ಕಾಮರತಿ ಉತ್ಸವದ ನಮಿತ್ತ ಸಾಂಸ್ಕೃತಿಕ ಕಾರ್ಯಕ್ರಮ ಮಾ. 27ರಂದು ಸಂಜೆ 6ಕ್ಕೆ ಜರುಗಲಿದೆ.

ಉದ್ಯಮಿಗಳಾದ ಕಾಶೀನಾಥಸಾ ಹಬೀಬ, ಅಶೋಕ ಸಂಕಣ್ಣವರ ಉದ್ಘಾಟಿಸುವರು. ಕಾಮರತಿ ಉತ್ಸವ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಅಧ್ಯಕ್ಷತೆ ವಹಿಸುವರು. ಮುಖ್ಯತಿಥಿಗಳಾಗಿ ನವೃತ್ತ ಪ್ರಾಚಾರ್ಯ ಅನಲ ವೈದ್ಯ, ಜಾನಪದ ಕಲಾವಿದ ಗವಿಸಿದ್ದಯ್ಯ ಹಳ್ಳಿಕೇರಿಮ